ಯಾರು ದಿನಕ್ಕೆ ನೂರು ಬಾರಿ ‘ಸುಬ್ಹಾನಲ್ಲಾಹಿ ವಬಿಹಮ್ದಿಹೀ’ ಎಂದು ಹೇಳುತ್ತಾರೋ, ಅವರ ಪಾಪಗಳು ಸಮುದ್ರದ ನೊರೆಯಷ್ಟೇ ಇದ್ದರೂ ಸಹ ಅಳಿಸಿಹೋಗುತ್ತವೆ

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅಲ್ಲಾಹನ ಸಂದೇಶವಾಹಕರು
(ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಯಾರು ದಿನಕ್ಕೆ ನೂರು ಬಾರಿ ‘ಸುಬ್ಹಾನಲ್ಲಾಹಿ ವಬಿಹಮ್ದಿಹೀ’ ಎಂದು ಹೇಳುತ್ತಾರೋ, ಅವರ ಪಾಪಗಳು ಸಮುದ್ರದ ನೊರೆಯಷ್ಟೇ ಇದ್ದರೂ ಸಹ ಅಳಿಸಿಹೋಗುತ್ತವೆ."
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿ ಇರಲಿ) ಇಲ್ಲಿ ತಿಳಿಸುವುದೇನೆಂದರೆ, ಯಾರು ದಿನಕ್ಕೆ ನೂರು ಬಾರಿ ‘ಸುಬ್ಹಾನಲ್ಲಾಹಿ ವಬಿಹಮ್ದಿಹೀ’ ಎಂದು ಹೇಳುತ್ತಾರೋ, ಅವರ ಪಾಪಗಳನ್ನು - ಅವು ಅಲೆಗಳು ಮತ್ತು ಬಿರುಗಾಳಿಗಳು ಉಂಟಾಗುವಾಗ ಸಮುದ್ರದ ನೀರಿನ ಮೇಲೆ ಕಾಣಿಸಿಕೊಳ್ಳುವ ಬಿಳಿ ನೊರೆಯಷ್ಟಿದ್ದರೂ ಸಹ - ಅಳಿಸಲಾಗುತ್ತದೆ ಮತ್ತು ಕ್ಷಮಿಸಲಾಗುತ್ತದೆ.

https://sunnah.global/hadeeth/kn/show/5516